# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1072**

ಸದಸ್ಯರ ಹೆಸರು : ಶ್ರೀ ಕೆ.ವಿ.ನಾರಾಯಣಸ್ವಾಮಿ

(ವಿಧಾನ ಸಭೆಯಿಂದ ಚುನಾಯಿತರಾದವರು )

ಉತ್ತರಿಸುವ ದಿನಾಂಕ : 22.12.2021.

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸೋಮಶೆಟ್ಟಿಹಳ್ಳಿ ಗ್ರಾಮದ ಸರ್ವೆ ನಂ.25ರ ಸರ್ಕಾರಿ ಭೂಮಿಯಲ್ಲಿ ಅಕ್ರಮವಾಗಿ ಮನೆಗಳು ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು ಸೋಮಶೆಟ್ಟಿಹಳ್ಳಿ ಗ್ರಾಮದ ಸ.ನಂ.25ರ ಸರ್ಕಾರಿ ಭೂಮಿಯಲ್ಲಿ ಅಕ್ರಮವಾಗಿ ಮನೆಗಳು ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಸದರಿ ಜಮೀನಿನಲ್ಲಿ ಎಷ್ಟು ಮನೆಗಳನ್ನು ಸಕ್ರಮಗೊಳಿಸಲಾಗಿದೆ; ಉಳಿದ ಮನೆಗಳನ್ನು ಸಕ್ರಮಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು ಸೋಮಶೆಟ್ಟಿಹಳ್ಳಿ ಗ್ರಾಮದ ಸ.ನಂ.25ರ ಜಮೀನು ಮೂಲತಃ ಸರ್ಕಾರಿ ಗೋಮಾಳ ಜಮೀನಾಗಿದ್ದು, ಸದರಿ ಸರ್ವೇ ನಂ.ಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ಕಾಯ್ದೆ ಕಲಂ 94ಸಿಸಿ ಅಡಿಯಲ್ಲಿ 126 ಅರ್ಜಿಗಳು ಸ್ವೀಕೃತವಾಗಿರುತ್ತವೆ. ಈ ಪೈಕಿ ಈಗಾಗಲೇ ಹರಾಜಾಗಿರುವ ಜಮೀನಿನ ವ್ಯಾಪ್ತಿಯಲ್ಲಿ ಬರುವ ವಿಸ್ತೀರ್ಣಕ್ಕೆ ಸಂಬಂಧಿಸಿದ 92 ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ.<br>ಉಳಿದ 34 ಅರ್ಜಿಗಳು ಬಿಡಿಎ ಯಿಂದ ಭೂಸ್ವಾಧೀನವಾಗಿರುವ ವಿಸ್ತೀರ್ಣದಲ್ಲಿ ಒಳಪಡುವುದರಿಂದ ಸದರಿ 34 ಅರ್ಜಿಗಳು ಪರಿಶೀಲನೆಯಲ್ಲಿದೆ. |
| ಇ) | ಅಕ್ರಮ ಮನೆಗಳ ನಿರ್ಮಾಣದಿಂದ ಸದರಿ ಜಾಗವನ್ನು ಹರಾಜಿನಲ್ಲಿ ಕೊಂಡ ವ್ಯಕ್ತಿಯು ಬೇರೊಂದು ಜಾಗವನ್ನು ನೀಡುವಂತೆ ಸಂಬಂಧಿಸಿದ ಜಿಲ್ಲಾಧಿಕಾರಿಗಳು/ತಹಶೀಲ್ದಾರರಿಗೆ | ಬೆಂಗಳೂರು ಉತ್ತರ ತಾಲ್ಲೂಕು ಸೋಮಶೆಟ್ಟಿಹಳ್ಳಿ ಗ್ರಾಮದ ಸ.ನಂ.25ರಲ್ಲಿನ 25.00 ಎಕರೆ ಜಮೀನನ್ನು ಶ್ರೀ ಸಚಿನ್ ನಾರಾಯಣ ಮತ್ತು ಪೃಥ್ವಿ ನಾರಾಯಣ ಇವರಿಗೆ ಹರಾಜಾಗಿದ್ದು, ಈ ವಿಸ್ತೀರ್ಣಕ್ಕೆ ಕಂದಾಯ ದಾಖಲೆಗಳಲ್ಲಿ ಪಹಣಿ ದಾಖಲಿಸಲಾಗಿರುತ್ತದೆ. |

| | | |
|---|---|---|
| | ಮನವಿಯನ್ನು ಸಲ್ಲಿಸಿದ್ದಾರೆಯೇ;ಸಲ್ಲಿಸಲಾಗಿದ್ದಲ್ಲಿ, ಅದರ ಪ್ರತಿಯನ್ನು ನೀಡುವುದು; | ಸದರಿ ಅರ್ಜಿದಾರರು ದಿನಾಂಕ:07.01.2019ರಂದು ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ಇವರಿಗೆ ಮನವಿ ಸಲ್ಲಿಸಿ ಹರಾಜಿನಲ್ಲಿ ಪಡೆದ ಜಮೀನಿಗೆ ಬದಲಿಯಾಗಿ ಅಷ್ಟೇ ವಿಸ್ತೀರ್ಣದ ಬದಲಿ ಜಮೀನು ನೀಡುವಂತೆ ಕೋರಿದ್ದು, ಈ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಗೆ ಹರಾಜಾಗಿರುವ ಜಮೀನಿನಲ್ಲಿ ಇರುವ ಅನಧಿಕೃತ ಮನೆಗಳನ್ನು ತೆರವುಗೊಳಿಸಿ ಹರಾಜುದಾರರಿಗೆ ಹಸ್ತಾಂತರಿಸಲು , ಮನೆಗಳನ್ನು ತೆರವುಗೊಳಿಸಲು ಸಾಧ್ಯವಿಲ್ಲದ ಪಕ್ಷದಲ್ಲಿ ಸೂಕ್ತ ಸಕಾರಣಗಳೊಂದಿಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. |
| ಈ) | ಸದರಿ ಜಮೀನಿನಲ್ಲಿ ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಯೊಬ್ಬರು ಸುಳ್ಳು ದಾಖಲೆಗಳನ್ನು ಸೃಷ್ಠಿ ಮಾಡಿ ಮನೆಗಳನ್ನು ನಿರ್ಮಾಣ ಮಾಡಿಸುತ್ತಿರುವ ಬಗ್ಗೆ ಗ್ರಾಮಸ್ಥರು ತಾಲ್ಲೂಕು ಪಂಚಾಯಿತಿ ಮತ್ತು ವಿವಿಧ ಕಾರ್ಯಾಲಯಕ್ಕೆ ದಾಖಲೆ ಸಮೇತ ದೂರು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಂತಹ ಪ್ರಕರಣ ಕಂಡುಬಂದಿರುವುದಿಲ್ಲ. |
| ಉ) | ಬಂದಿದ್ದಲ್ಲಿ, ಸುಳ್ಳು ದಾಖಲೆಗಳನ್ನು ಸೃಷ್ಠಿಸಿ, ಸರ್ಕಾರಿ ಭೂಮಿಯನ್ನು ಒತ್ತುವರಿ ಮಾಡಲು ಯತ್ನಿಸುತ್ತಿರುವ ವ್ಯಕ್ತಿಯ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; ಕ್ರಮ ಕೈಗೊಳ್ಳದಿದ್ದರೆ, ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು? | ಉದ್ಭವಿಸುವುದಿಲ್ಲ. |

ಸಂಖ್ಯೆ: ಆರ್‌ಡಿ 256 ಎಲ್‌ಜಿಕ್ಯೂ 2021 (ಇ)

(ಆರ್.ಅಶೋಕ)

ಕಂದಾಯ ಸಚಿವರು